**ಮಾನ್ಯ ವಿಧಾನ ಸಭೆಯ ಪರಿಷತ್ತು ಸದಸ್ಯರಾದ ಶ್ರೀ ಡಿ.ಎಸ್. ಅರುಣ್ ಇವರ ನಿಯಮ 72ರಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆಗೆ ಉತ್ತರ.**

**ಪ್ರಶ್ನೆ:**

ಕರ್ನಾಟಕ ರಾಜ್ಯ ನಗರಾಭಿವೃದ್ಧಿ ಪ್ರಾಧಿಕಾರಗಳ ನೌಕರರಿಗೆ ಏಕ ರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸುವ ಕುರಿತು ರಚಿಸಲಾದ ಸಮಿತಿಯು ಎರಡು ವರ್ಷ ಕಳೆದರೂ ವರದಿ ನೀಡದಿರುವುದರಿಂದ ಅಧಿಕಾರಿ / ನೌಕರರು ಮುಂಬಡ್ತಿ ಅವಕಾಶಗಳಿಂದ ವಂಚಿತರಾಗುತ್ತಿರುವ ಬಗ್ಗೆ.

**ಉತ್ತರ:**

ಕರ್ನಾಟಕ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕರೂಪ ವೃಂದ ಮತ್ತು ನೇಮಕಾತಿಯ ಕರಡು ನಿಯಮಗಳಿಗೆ ಕಾನೂನು ಇಲಾಖೆ, ಆರ್ಥಿಕ ಇಲಾಖೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನಾ ರಚನಾಇಲಾಖೆಯು ನೀಡಿರುವ ಅಭಿಪ್ರಾಯಗಳನ್ನು ಪರಿಶೀಲಿಸಿ ಸೂಕ್ತ ಪರಿಷ್ಕರಣೆಗಳನ್ನು ಅಳವಡಿಸಿಕೊಳ್ಳಲು ನಗರಾಭಿವೃದ್ಧಿ ಪ್ರಾಧಿಕಾರಗಳ ಅಧಿಕಾರಿ/ಸಿಬ್ಬಂದಿಗಳ ನೇಮಕಾತಿ ವಿಧಾನ, ಸೇವಾ ಅರ್ಹತೆ, ಷರತ್ತುಗಳು ಮುಂತಾದವುಗಳ ಕುರಿತು ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಲು ಆದೇಶ ಸಂಖ್ಯೆ ನಅಇ 21 ಅಪ್ರಾಸೇ 2014, ದಿನಾಂಕ: 11.10.2022 ರಲ್ಲಿ ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ಈ ಕೆಳಕಂಡಂತೆ ರಚಿಸಲಾಗಿದೆ.

| ಕ್ರ.ಸಂ. | ಹುದ್ದೆ | ಸ್ಥಾನ |
|---|---|---|
| 1 | ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಕೇಂದ್ರ ಕಛೇರಿ, ಬೆಂಗಳೂರು. | ಅಧ್ಯಕ್ಷರು |
| 2 | ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ಕೇಂದ್ರ ಕಛೇರಿ, ಬೆಂಗಳೂರು. | ಸದಸ್ಯರು |
| 3 | ನಗರ ಮತ್ತು ಗ್ರಾಮಾಂತರ ಯೋಜನಾ ಹೆಚ್ಚುವರಿ ನಿರ್ದೇಶಕರು, ಕರ್ನಾಟಕ ರಾಜ್ಯ ನಗರ ಯೋಜನಾ ಮಂಡಳಿ, ಬೆಂಗಳೂರು. | ಸದಸ್ಯರು |
| 4 | ಜಂಟಿ ನಿರ್ದೇಶಕರು (ಆಡಳಿತ), ಪೌರಾಡಳಿತ ನಿರ್ದೇಶನಾಲಯ, ವಿ.ವಿ. ಟವರ್, ಬೆಂಗಳೂರು. | ಸದಸ್ಯರು |
| 5 | ನಗರ ಮತ್ತು ಗ್ರಾಮಾಂತರ ಯೋಜನಾ ಜಂಟಿ ನಿರ್ದೇಶಕರು (ಕೇಂದ್ರ ಕಾರ್ಯಸ್ಥಾನ), ಕೇಂದ್ರ ಕಛೇರಿ, ಬೆಂಗಳೂರು.. | ಸದಸ್ಯರು |
| 6 | ನಗರ ಯೋಜಕ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರ, ಮೈಸೂರು. | ಸದಸ್ಯರು |
| 7 | ನಗರ ಯೋಜಕ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರ, ಹುಬ್ಬಳ್ಳಿ-ಧಾರವಾಡ. | ಸದಸ್ಯರು |
| 8 | ನಗರ ಯೋಜಕ ಸದಸ್ಯರು, ನಗರಾಭಿವೃದ್ಧಿ ಪ್ರಾಧಿಕಾರ, ಚಿತ್ರದುರ್ಗ. | ಸದಸ್ಯರು |
| 9 | ನಗರ ಮತ್ತು ಗ್ರಾಮಾಂತರ ಉಪ ನಿರ್ದೇಶಕರು (ವಿನ್ಯಾಸ ವಿಭಾಗ) ಕೇಂದ್ರ ಕಛೇರಿ, ಬೆಂಗಳೂರು. | ಸದಸ್ಯ ಕಾರ್ಯದರ್ಶಿ |

ರಾಜ್ಯದ ಕೆಲವೊಂದು ನಗರಾಭಿವೃದ್ಧಿ ಪ್ರಾಧಿಕಾರಗಳಲ್ಲಿ ಈಗಾಗಲೇ ಪ್ರತ್ಯೇಕವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದ್ದು, ಆಯಾ ಪ್ರಾಧಿಕಾರಗಳಲ್ಲಿ ಪ್ರಸ್ತುತ ಜಾರಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳ ಅನುಸಾರ ನೇಮಕಾತಿ ಹೊಂದಿ ಹಾಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳ ಅಡಿಯಲ್ಲಿ ಮುಂಬಡ್ತಿ ನೀಡಲು ಕ್ರಮವಹಿಸಲಾಗುತ್ತಿರುವುದರಿಂದ ಪ್ರಾಧಿಕಾರಗಳ ಅಧಿಕಾರಿ / ನೌಕರರು ಮುಂಬಡ್ತಿ ಅವಕಾಶಗಳಿಂದ ವಂಚಿತರಾಗುವುದಿಲ್ಲ.

ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕ ರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸುವ ಕುರಿತು ರಚಿಸಲಾದ ಸಮಿತಿಯು ಹಲವು ಸಭೆಗಳನ್ನು ನಡೆಸಿದ್ದು, ಸದರಿ ಸಭೆಗಳ ತೀರ್ಮಾನದಂತೆ ರಾಜ್ಯದ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕ ರೂಪ ವೃಂದ ಮತ್ತು ನೇಮಕಾತಿ ನಿಯಮಗಳ ಕರಡನ್ನು ಸಿದ್ಧಪಡಿಸುವ ಪ್ರಕ್ರಿಯೆ ಜಾರಿಯಲ್ಲಿದ್ದು, ಸದರಿ ಪ್ರಕ್ರಿಯೆಯು ಪೂರ್ಣಗೊಂಡ ನಂತರ ರಾಜ್ಯದ ಎಲ್ಲಾ ನಗರಾಭಿವೃದ್ಧಿ ಪ್ರಾಧಿಕಾರಗಳಿಗೆ ಏಕ ರೂಪ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮಗೊಳಿಸಲು ಕ್ರಮವಹಿಸಲಾಗುವುದು.

**ಸಂಖ್ಯೆ: ನಅಇ 20 ಎಲ್ ಸಿಕ್ಯೂ 2024**

16/02/2024

**(ಬಿ.ಎಸ್. ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು